# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2014-15ನೇ ಸಾಲಿಗೆ ಆರ್.ಕೆ.ವಿ.ವೈ. ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ.

ಓದಲಾಗಿದೆ:- (1) ಕೃಷಿ ಇಲಾಖೆಯ ಆದೇಶ ಸಂಖ್ಯೆ: ಎಜಿಡಿ/136/ ಎಎಂಎಸ್/2014 (ಪಿ1), ದಿನಾಂಕ: 29-01-2015.

(2) ಸರ್ಕಾರದ ಪತ್ರ ಸಂಖ್ಯೆ: ಪಸಂಮೀ/24/ಮೀಇಯೋ/2015, ದಿನಾಂಕ: 10-03-2015.

(3) ಪತ್ರ ಸಂಖ್ಯೆ: ಮೀನಿ/08/ಕಟ್ಟಡ(ಒ)/2015 (2) ದಿನಾಂಕ: 12-05-2015 ಮತ್ತು 23-05-2015.

******

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ, 2014-15ನೇ ಸಾಲಿಗೆ ಕರ್ನಾಟಕದಲ್ಲಿನ ಮೀನುಮರಿ ಉತ್ಪಾದನಾ ಕೇಂದ್ರಗಳ ಬಲವರ್ಧನೆ ಯೋಜನೆಗಾಗಿ ರೂ.2.00 ಕೋಟಿಗಳನ್ನು ಬಿಡುಗಡೆ ಮಾಡಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ರಾಜ್ಯದ ವಿವಿಧ ಮೀನುಮರಿ ಕೇಂದ್ರಗಳ ದುರಸ್ತಿ ಕಾಮಗಾರಿಗಳನ್ನು ಕರ್ನಾಟಕ ಗೃಹ ಮಂಡಳಿ ಮೂಲಕ ಕೈಗೊಳ್ಳಲು ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಈಗಾಗಲೇ ಸದರಿ ಸಂಸ್ಥೆಗೆ ವಹಿಸಿರುವ ಕಾಮಗಾರಿಗಳಿಗೆ ಅಂದಾಜು ಪಟ್ಟಿ ತಯಾರಿಸಿ, ಕಾಮಗಾರಿಗಳನ್ನು ಪೂರ್ಣಗೊಳಿಸುವುದು ವಿಳಂಬವಾಗುವ ಸಾಧ್ಯತೆ ಇರುತ್ತದೆಂದು, ರೂ.500.00 ಲಕ್ಷಗಳು 2014-15 ನೇ ಸಾಲಿನ ಆರ್.ಕೆ.ವಿ.ವೈ. ಯೋಜನೆಯ ಅನುದಾನವಾಗಿದ್ದು, ಈಗಾಗಲೇ ಒಂದು ವರ್ಷ ಕಳೆದಿರುತ್ತದೆ. ಆದ್ದರಿಂದ, ಸದರಿ ಯೋಜನೆಯಡಿ ನಿಗದಿಯಾದ ಅನುದಾನ ರೂ.500.00 ಲಕ್ಷಗಳಲ್ಲಿ ರಾಜ್ಯದ ವಿವಿಧ ಮೀನುಮರಿ ಕೇಂದ್ರಗಳಲ್ಲಿ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಿರುವ ನಿರ್ಮಾಣ ಸಂಸ್ಥೆಯಾದ ಕರ್ನಾಟಕ ಗೃಹ ಮಂಡಳಿಯನ್ನು ಬದಲಾಯಿಸುವುದು ಸೂಕ್ತವಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ರೂ.485.00 ಲಕ್ಷಗಳಲ್ಲಿ 3 ಮೀನುಮರಿ ಕೇಂದ್ರದ ಕಾಮಗಾರಿಗಳನ್ನು ಸದರಿಯವರ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಲು ಕೋರಿರುತ್ತಾರೆಂದು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 ರ ಕಲಂ 4ಜಿ ಅಡಿಯಲ್ಲಿ ರೂ.200.00 ಲಕ್ಷಗಳವರೆಗಿನ ಕಾಮಗಾರಿಗೆ 2015-16ನೇ ಸಾಲಿಗೆ ರಿಯಾಯಿತಿ ನೀಡಿರುವುದರಿಂದ, ವಿವಿಧ ಮೀನುಮರಿ ಕೇಂದ್ರಗಳ ಕಾಮಗಾರಿ ಅಂದಾಜು ವೆಚ್ಚ ರೂ.200.00 ಲಕ್ಷಕ್ಕಿಂತ ಕಡಿಮೆ ಇರುವುದರಿಂದ, ಈ ಕೇಂದ್ರಗಳ ಕಾಮಗಾರಿಗಳನ್ನು ಈ ಸಂಸ್ಥೆಗೆ ನೇರವಾಗಿ ವಹಿಸಬಹುದಾಗಿದೆಯಲ್ಲದೆ, ಈ ಸಂಸ್ಥೆಯು ಕಾಮಗಾರಿಗಳನ್ನು ಸ್ವತಃ ಅವರೇ ನಿರ್ವಹಿಸುವುದರಿಂದ, ಕಾಮಗಾರಿಗಳನ್ನು ತ್ವರಿತವಾಗಿ ಮುಕ್ತಾಯಗೊಳಿಸುವ ಸಾಧ್ಯತೆಗಳಿರುತ್ತದೆ ಎಂದು ತಿಳಿಸಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 133 ಮೀಇಯೋ 2015, ಬೆಂಗಳೂರು ದಿನಾಂಕ: 24-06-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಮೀನುಮರಿ ಉತ್ಪಾದನಾ ಕೇಂದ್ರಗಳಲ್ಲಿ ಈ ಕೆಳಕಂಡ ಕಾಮಗಾರಿಯನ್ನು ರೂ.200.00 ಲಕ್ಷ (ಇನ್ನೂರ ಲಕ್ಷ ರೂಪಾಯಿಗಳು ಮಾತ್ರ)ಗಳಲ್ಲಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

| ಕ್ರಮ ಸಂಖ್ಯೆ | ಕಾಮಗಾರಿಯ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1) | Construction of Earthern Fish Ponds, Packing Shed, Water supply and Drainage, Hatchery and Internal Road works at New Nugu Fish Farm, H.D.Kote taluk, Mysore District. | 200.00 |

ಸದರಿ ಮೊತ್ತವನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಅಡಿಯಲ್ಲಿ ರೂ.5.00 ಕೋಟಿ ಅನುದಾನದಿಂದ ಭರಿಸಲು ಹಾಗೂ ಕೆ.ಆರ್.ಐ.ಡಿ.ಎಲ್. ಸಂಸ್ಥೆಯಲ್ಲಿ ಠೇವಣಿ ಇಡಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆದೇಶ ಸಂಖ್ಯೆ: ಎಫ್‌ಡಿ/3/ಟಿಎಫ್‌ಪಿ/2014, ದಿನಾಂಕ: 04-04-2014 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

**ಇವರಿಗೆ:**

1. ಮಹಾಲೇಖಪಾಲರು (ಎ ಮತ್ತು ಇ)(ಆಡಿಟ್ 1 ಮತ್ತು 2), ಕರ್ನಾಟಕ, ಬೆಂಗಳೂರು.
2. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ಹಾಗು ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿ., ಬೆಂಗಳೂರು.
8. ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚುವರಿ ಪ್ರತಿಗಳು.